# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :– 06/01/2022 ರಂದು ವಾರ್ಡಿನ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ವಾರ್ಡಿನ ಕೊಂದು ಕೋರತೆಗಳ ಬಗ್ಗೆ ನಡೆದ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು :–**

- ಶ್ರೀ. ಶ್ರೀ.ರವಿವಡ್ಡರ್, ನೋಡಲ್ ಅಧಿಕಾರಿ
- ಶ್ರೀ. ಬಸವರಾಜು ವಾರ್ಡ್ ಅಭಿಯಂತರರು
- ಶ್ರೀ. ವಿನಯ ಕಿರಿಯ ಆರೋಗ್ಯ ಪರೀವಿಕ್ಷಕರು
- ಶ್ರೀ. ರಾಹುಲ್, ಸಿವಿಲ್ ಇಂಜಿನೀಯರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್ ಸಂಖ್ಯೆ–31.
- ಶ್ರೀ. ಅಕ್ಕಮ್ಮ, ಎಲೆಕ್ಟ್ರಿಕ್ಲ್ ಇಂಜಿನೀಯರ್ ಬೆಸ್ಕಾಮಂ ವಾರ್ಡ್ ಸಂಖ್ಯೆ–31.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೋಡಲ್ ಅಧಿಕಾರಿರವರು ಎಲ್ಲಾ ಸದಸ್ಯರು ಹಾಗೂ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್–31 ರ ವಾರ್ಡ್ ಸಮಿತಿ ಸಭೆಯನ್ನು ತಮಿಳ್ ಸಂಘ ಸ್ಕೂಲ್‌ನಲ್ಲಿ ನಡೆಸಲಾಯಿತು. ನೋಡಲ್ ಅಧಿಕಾರಿಗಳು ವಾರ್ಡ್‌ನ ಸಾರ್ವಜನಿಕರ ಕುಂದು ಕೊರತೆಗಳನ್ನು ಸದಸ್ಯರು ಮತ್ತು ಅಧಿಕಾರಿಗಳ ಜೋತೆಯಲ್ಲಿ ಚರ್ಚಿಸಿದರು ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳವ ಬಗ್ಗೆ ಸಂಬಂದಪಟ್ಟ ಅಧಿಕಾರಿ ಹಾಗೂ ನೌಕರರುಗಳಿಗೆ ಈ ಕೆಳಕಂಡತೆ ತಿಳಿಸಲಾಗಿರುತ್ತದೆ

### ➢ ಆರೋಗ್ಯ ಇಲಾಖೆಗೆ ಸಂಬಂದಿಸಿರುವುದು

- ವಾರ್ಡ್ ವ್ಯಾಪ್ತಿಯಲ್ಲಿನ ಬ್ಲಾಕ್ ಸ್ಪಾಟ್‌ಗಳನ್ನು ತ್ವರಿತವಾಗಿ ವಿಲೇವಾರು ಮಾಡಲು ಅಧಿಕಾರಿ ಹಾಗು ಸಿಬ್ಬಂದಿ ವರ್ಗದವರಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯ ಬಸವನಗರದಲ್ಲಿ ಕಸದ ಸರಿಯಾಗಿ ನಿರ್ವಹಣೆ ಆಗುತ್ತಿಲ್ಲ ಕೂಡಲೆ ಕ್ರಮ ವಹಿಸಲು ಸೂಚಿಸಿದರು.

**ಕ್ರಮ : ಹಿರಿಯ ಆರೋಗ್ಯ ಪರೀವಿಕ್ಷಕರು ವಾರ್ಡ್ ವ್ಯಾಪ್ತಿಯಲ್ಲಿನ ಬ್ಲಾಕ್ ಸ್ಪಾಟ್‌ಗಳನ್ನು ಶಿಘ್ರದಲ್ಲೆ ತೇರುವುಗೊಳಿಸಲು ಕ್ರಮ ವಹಿಸುತ್ತೇನೆ ಎಂದು ಪ್ರತಿಕ್ರಿಯೆ ನೀಡಿದರು.**

➢ **ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ ನೀರು ಮತ್ತು ಒಳಚರಂಡಿ ಕಾಮಗಾರಿ .ನಿರ್ವಹಿಸಲು ರಸ್ತೆ ಕತ್ತರಿಸುತ್ತಿರುವುದು, ಸದರಿ ಕಾಮಗಾರಿಗಳ ನಿರ್ವಹಣೆ ಸಮಯದಲ್ಲಿ ವಾರ್ಡ್ ಇಂಜಿನಿಯರ್‌ರವರಿಗೆ ಸೂಚನೆ/ ಮಾಹಿತಿ ನೀಡದೆ ಇರುವುದು ಕಂಡುಬಂದಿರುತ್ತದೆ. ಕಾಮಗಾರಿ ಸಮಯದಲ್ಲಿ ಮಾಹಿತಿ ನೀಡಲು ಹಾಗೂ ರಸ್ತೆಯನ್ನು ಯತಾಸ್ಥಿತಿಗೆ ತಂದು ಸಂಪರ್ಕ ನೀಡಲು ಅಧಿಕಾರಿಗಳಿಗೆ ಸೂಚಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಅಶೋಕನಗರರಲ್ಲಿ ನೀರಿನ ಸಮಸ್ಯೆ ಪರಿಹರಿಸಲು ಸೂಚಿಸಿದರು.

**ಕ್ರಮ : ಕಿರಿಯ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಕೂಡಲೆ ಕ್ರಮ ವಹಿಸುತ್ತೇನೆ ಎಂದು ಪ್ರತಿಕ್ರಿಯೆ ನೀಡಿದರು.**

➢ **ಬೆಸ್ಕಾಂ ಇಲಾಖೆಗೆ ಸಂಬಂಧಿಸಿರುವುದು**

- ವಾರ್ಡ್ ವ್ಯಾಪ್ತಿಯಲ್ಲಿ ಕೇಬಲ್ ಮತ್ತು ಹೊಸದಾಗಿ ಲೈನ್ ನೀಡಲು ರಸ್ತೆ ಕತ್ತರಿಸುತ್ತಿರುವುದು, ಸದರಿ ಕಾಮಗಾರಿಗಳ ನಿರ್ವಹಣೆ ಸಮಯದಲ್ಲಿ ವಾರ್ಡ್ ಇಂಜಿನಿಯರ್‌ರವರಿಗೆ ಸೂಚನೆ/ ಮಾಹಿತಿ ನೀಡದೆ ಇರುವುದು ಕಂಡುಬಂದಿರುತ್ತದೆ. ಕಾಮಗಾರಿ ಸಮಯದಲ್ಲಿ ಮಾಹಿತಿ ನೀಡಲು ಹಾಗೂ ರಸ್ತೆಯನ್ನು ಯತಾಸ್ಥಿತಿಗೆ ತಂದು ಸಂಪರ್ಕ ನೀಡಲು ಅಧಿಕಾರಿಗಳಿಗೆ ಸೂಚಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಅನ್ವರ್ ಲೇಔಟ್‌ನಲ್ಲಿ ವಿದ್ಯುತ್ ಏರುಪೇರು ಆಗುತ್ತಿರುವುದು ಕಂಡುಬಂದಿದ್ದು ಕೂಡಲೆ ಸರಿಪಡಿಸಲು ಸೂಚಿಸಿದರು.

**ಕ್ರಮ : ಸಹಾಯಕ ಅಭಿಯಂತರರು (ಬೆಸ್ಕಾಂ) ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಕೂಡಲೆ ಕ್ರಮ ವಹಿಸುತ್ತೇನೆ ಎಂದು ಪ್ರತಿಕ್ರಿಯೆ ನೀಡಿದರು.**

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

**ನೋಡಲ್ ಅಧಿಕಾರಿ/ ಸದಸ್ಯ ಕಾರ್ಯದರ್ಶಿ**
**ವಾರ್ಡ್–31**

**ಪ್ರತಿಗಳನ್ನು:**

- ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.
- ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ
- ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.

- ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ–ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಸ್ಟ್ರೀಟ್ ಲೈಟ್) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಛೇರಿ ಪ್ರತಿ.